ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸರ್ಕಾರಿ ಕಛೇರಿಗಳ ವೆಬ್‌ಸೈಟ್ ನಿರ್ವಹಣೆ ಕುರಿತು

ಶ್ರೀ ಯು. ಬಿ. ವೆಂಕಟೇಶ್(ನಾಮನಿರ್ದೇಶನ ಹೊಂದಿದವರು) -

89 (183) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಇಲಾಖೆಯ ವೆಬ್‌ಸೈಟ್‌ಗಳ ನಿರ್ವಹಣೆಯನ್ನು ಯಾವ ಸಂಸ್ಥೆ ನಿರ್ವಹಿಸುತ್ತಿದೆ;

(ಆ) ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಇಲಾಖೆಯ ವೆಬ್‌ಸೈಟ್‌ಗಳು ಆಯಾ ಸಂದರ್ಭಕ್ಕೆ ತಕ್ಕಂತೆ ಅಪ್‌ಡೇಟ್ ಆಗದೆ ಹಳೆಯ ಮಾಹಿತಿಯನ್ನೇ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇತ್ತೀಚಿನ ದಿನಗಳಲ್ಲಿ ಇಲಾಖೆಗಳಲ್ಲಿ ಸಾಮಾಜಿಕ ಜಾಲತಾಣಗಳಾದ ಟ್ವಿಟರ್, ಇನ್ಸಟಾಗ್ರಾಂ, ವಾಟ್ಸಾಪ್ ಮತ್ತು ಫೇಸ್‌ಬುಕ್ ಬಳಕೆಯ ಮೂಲಕ ಕಾಗದ ರಹಿತ ಆಡಳಿತವನ್ನು ಸುಗಮಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು;

(ಈ) ಸರ್ಕಾರಿ ಕಛೇರಿಗಳಲ್ಲಿ ಇ-ಆಡಳಿತ ವ್ಯವಸ್ಥೆಯಿದ್ದು ಸರ್ವರ್ ಸಮಸ್ಯೆಯಿಂದ ಸದರಿ ವ್ಯವಸ್ಥೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?